Akashvani: Bangalore

National Bulletin In Kannada

01.07.2026: 19.35hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**ಮುಖ್ಯಾಂಶಗಳು :**

1. ಸರ್ವತೋಮುಖ ಅಭಿವೃದ್ಧಿಗೆ ವೇಗ ನೀಡಿದ ಡಿಜಿಟಲ್ ಇಂಡಿಯಾ ಉಪಕ್ರಮ - ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದನೆ
2. ದೆಹಲಿಯ ದ್ವಾರಕಾ ಎಕ್ಸ್‌ಪ್ರೆಸ್ ವೇ; ಷಟ್ಪಥ ರಸ್ತೆ ಸುರಂಗ ಮಾರ್ಗ ನಿರ್ಮಾಣಕ್ಕೆ ಕೇಂದ್ರ ಸಚಿವ ಸಂಪುಟ ಅನುಮೋದನೆ
3. ಅಯೋಧ್ಯೆ ರಾಮಮಂದಿರ ದೇಣಿಗೆ ದುರುಪಯೋಗ ಪ್ರಕರಣ; ಎಸ್‌ಐಟಿ ವರದಿ ಸಲ್ಲಿಕೆ ಅವಧಿ ವಿಸ್ತರಿಸಿದ ಉತ್ತರ ಪ್ರದೇಶ ಸರ್ಕಾರ
4. ಟಿ-೨೦ ಕ್ರಿಕೆಟ್; ಸರಣಿಯ ಮೊದಲ ಪಂದ್ಯದಲ್ಲಿಂದು ಭಾರತ-ಇಂಗ್ಲೆಂಡ್ ತಂಡಗಳ ನಡುವೆ ಸೆಣಸಾಟ
5. ಫಿಫಾ ವಿಶ್ವಕಪ್ ಫುಟ್ಬಾಲ್; ೩೨ ರ ಸುತ್ತಿನ ಪಂದ್ಯದಲ್ಲಿಂದು ಇಂಗ್ಲೆಂಡ್ - ಕಾಂಗೋ ಮುಖಾಮುಖಿ

**********

ಡಿಜಿಟಲ್ ಇಂಡಿಯಾ ಉಪಕ್ರಮವು ಆಡಳಿತವನ್ನು ಮರು ವ್ಯಾಖ್ಯಾನಿಸಿದೆ, ನಾಗರಿಕರನ್ನು ಸಬಲೀಕರಣಗೊಳಿಸಿದೆ ಮತ್ತು ಸರ್ವತೋಮುಖ ಅಭಿವೃದ್ಧಿಯನ್ನು ವೇಗಗೊಳಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಡಿಜಿಟಲ್ ಇಂಡಿಯಾ ಉಪಕ್ರಮಕ್ಕೆ ೧೧ ವರ್ಷಗಳು ಸಂದ ಹಿನ್ನೆಲೆಯಲ್ಲಿ ಪ್ರತಿಕ್ರಿಯಿಸಿರುವ ಅವರು, ಬಡವರು ಮತ್ತು ಹಿಂದುಳಿದವರನ್ನು ಸಬಲೀಕರಣಗೊಳಿಸುವಲ್ಲಿ ಮತ್ತು ನಾಗರಿಕರಿಗೆ ಜೀವನವನ್ನು ಸುಲಭಗೊಳಿಸುವಲ್ಲಿ ಈ ಉಪಕ್ರಮ ಪ್ರಮುಖ ಪಾತ್ರವಹಿಸಿದೆ ಎಂದರು. ಆಪ್ಟಿಕಲ್ ಫೈಬರ್ ಜಾಲ ವಿಸ್ತರಣೆಯಿಂದ ಡಿಜಿಟಲ್ ವಹಿವಾಟುಗಳ ಏರಿಕೆಯವರೆಗೆ, ಈ ಉಪಕ್ರಮದ ಅಭೂತಪೂರ್ವ ಯಶಸ್ಸು ಭಾರತದತ್ತ ಜಾಗತಿಕ ಗಮನವನ್ನು ಸೆಳೆದಿದೆ ಎಂದು ಪ್ರಧಾನಿ ಹೇಳಿದರು. ತಡೆರಹಿತ ಡಿಜಿಟಲ್ ಪಾವತಿಗಳು ಮತ್ತು ನೇರ ಹಣಕಾಸು ವರ್ಗಾವಣೆಗಳು ಪಾರದರ್ಶಕತೆಯೊಂದಿಗೆ ಫಲಾನುಭವಿಗಳನ್ನು ತಲುಪುತ್ತಿವೆ. ಡಿಜಿಟಲ್ ಇಂಡಿಯಾ, ಭಾರತದ ಎಲ್ಲಾ ಪ್ರದೇಶಗಳಿಗೆ ವಿಶೇಷವಾಗಿ ಹಳ್ಳಿಗಳಿಗೆ ನಾವೀನ್ಯತೆಯನ್ನು ಕೊಂಡೊಯ್ದಿದೆ. ಈ ಉಪಕ್ರಮವು ಶಿಕ್ಷಣ, ಆರೋಗ್ಯ ರಕ್ಷಣೆ, ಕೃಷಿ, ವಾಣಿಜ್ಯ ಮತ್ತು ಸಾರ್ವಜನಿಕ ಸೇವಾ ವಿತರಣೆಯನ್ನು ಬಲಪಡಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಪ್ರತಿಪಾದಿಸಿದರು.

**********

ದ್ವಾರಕಾ ಎಕ್ಸ್‌ಪ್ರೆಸ್ ವೇ ಅನ್ನು ದೆಹಲಿಯ ನೆಲ್ಸನ್ ಮಂಡೇಲಾ ಮಾರ್ಗ, ವಸಂತ್ ಕುಂಜ್‌ನೊಂದಿಗೆ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿ ೧೪೮ರಲ್ಲಿ ಷಟ್ಪಥ ರಸ್ತೆ ಸುರಂಗ ಮಾರ್ಗ ನಿರ್ಮಾಣಕ್ಕೆ ಕೇಂದ್ರ ಸಚಿವ ಸಂಪುಟ ಇಂದು ಅನುಮೋದನೆ ನೀಡಿದೆ. ಈ ಕುರಿತು ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ಸಚಿವ ಅಶ್ವಿನಿ ವೈಷ್ಣವ್, ೮.೧ ಕಿಲೋಮೀಟರ್ ವಿಸ್ತೀರ್ಣದ ಯೋಜನೆಯನ್ನು ಒಟ್ಟು ೬೭ ಸಾವಿರದ ೯೬೯ ಕೋಟಿ ರೂಪಾಯಿ ವೆಚ್ಚದಲ್ಲಿ ಅಭಿವೃದ್ಧಿಪಡಿಸಲಾಗುವುದು ಎಂದು ತಿಳಿಸಿದರು. ಉತ್ತರ ಪ್ರದೇಶದ ರಾಷ್ಟ್ರೀಯ ಹೆದ್ದಾರಿ ೩೪ರ ಕಾನ್ಪುರ್ - ಕಬ್ರೈ ವಿಭಾಗದ ನಿರ್ಮಾಣಕ್ಕೂ ಕೇಂದ್ರ ಸರ್ಕಾರ ಅನುಮೋದನೆ ನೀಡಿದೆ. ಈ ಯೋಜನೆಯ ಅಂದಾಜು ವೆಚ್ಚ ೭ ಸಾವಿರದ ೧೪೫ ಕೋಟಿ ರೂಪಾಯಿ ಆಗಿದೆ ಎಂದು ಮಾಹಿತಿ ನೀಡಿದ್ದಾರೆ. ಈ ಯೋಜನೆಯು ಕಾನ್ಪುರ ಮತ್ತು ಕಬ್ರೈ ನಡುವೆ ತಡೆರಹಿತ, ಹೆಚ್ಚಿನ ವೇಗದ ಸಂಪರ್ಕವನ್ನು ಒದಗಿಸುತ್ತದೆ. ಅಲ್ಲದೆ, ಸಾಗರ್, ಭೋಪಾಲ್ ಮತ್ತು ಮಧ್ಯಪ್ರದೇಶದ ಇತರ ಭಾಗಗಳಿಗೆ ಮುಂದಿನ ಸಂಪರ್ಕವನ್ನು ಬಲಪಡಿಸುತ್ತದೆ ಎಂದು ಸಚಿವ ಅಶ್ವಿನಿ ವೈಷ್ಣವ್ ವಿವರಿಸಿದರು.

**********

ಅಯೋಧ್ಯೆಯ ರಾಮಮಂದಿರ ದೇಣಿಗೆ ದುರುಪಯೋಗದ ಆರೋಪಗಳನ್ನು ತನಿಖೆ ನಡೆಸುತ್ತಿರುವ ವಿಶೇಷ ತನಿಖಾ ತಂಡ - ಎಸ್‌ಐಟಿಗೆ ತನ್ನ ವರದಿ ಸಲ್ಲಿಸುವ ಕಾಲಾವಧಿಯನ್ನು ಉತ್ತರ ಪ್ರದೇಶ ಸರ್ಕಾರ ೧೫ ದಿನಗಳ ವರೆಗೆ ವಿಸ್ತರಿಸಿದೆ. ಎಸ್‌ಐಟಿ ತನ್ನ ತನಿಖೆಯ ವ್ಯಾಪ್ತಿಯನ್ನು ವಿಸ್ತರಿಸಲು ಮತ್ತು ಪ್ರಕರಣದ ಎಲ್ಲಾ ಅಂಶಗಳ ಬಗ್ಗೆ ಸಮಗ್ರ ತನಿಖೆ ನಡೆಸಲು ಅನುವು ಮಾಡಿಕೊಡಲು ಈ ವಿಸ್ತರಣೆಯನ್ನು ನೀಡಲಾಗಿದೆ. ಉತ್ತರ ಪ್ರದೇಶ ಸರ್ಕಾರ ಜೂನ್ ೧೫ರಂದು ಲಖನೌ ಜಿಲ್ಲಾಧಿಕಾರಿ ವಿಜಯ್ ವಿಶ್ವಾಸ್ ಪಂತ್ ಅವರ ನೇತೃತ್ವದಲ್ಲಿ ತನಿಖೆಗಾಗಿ ಮೂವರು ಸದಸ್ಯರ ತಂಡವನ್ನು ರಚಿಸಿದೆ. ಏಳು ದಿನಗಳಲ್ಲಿ ಪ್ರಾಥಮಿಕ ವರದಿಯನ್ನು ಮತ್ತು ೧೫ ದಿನಗಳಲ್ಲಿ ಅಂತಿಮ ವರದಿಯನ್ನು ಸಲ್ಲಿಸುವಂತೆ ಈ ತಂಡಕ್ಕೆ ಸೂಚಿಸಲಾಗಿತ್ತು. ಈ ಅವಧಿ ನಿನ್ನೆಗೆ ಕೊನೆಗೊಂಡಿದೆ. ಇದರ ಹಿನ್ನೆಲೆಯಲ್ಲಿ ಅವಧಿಯನ್ನು ವಿಸ್ತರಿಸಲಾಗಿದೆ. ಪ್ರಾಥಮಿಕ ವರದಿ ಸಲ್ಲಿಸಿದ ನಂತರ ೮ ಮಂದಿ ಆರೋಪಿಗಳನ್ನು ಪೊಲೀಸರು ಬಂಧಿಸಿದ್ದಾರೆ.

**********

ಜನಸಂಖ್ಯಾ ಬದಲಾವಣೆಗಳ ಕುರಿತು ಅಧ್ಯಯನ ನಡೆಸುತ್ತಿರುವ ಉನ್ನತ ಮಟ್ಟದ ಸಮಿತಿಯು ತನ್ನ ಶಿಫಾರಸುಗಳನ್ನು ಆದಷ್ಟು ಶೀಘ್ರದಲ್ಲಿ ಸಲ್ಲಿಸಬೇಕು ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಸೂಚಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಈ ನಿರ್ದೇಶನ ನೀಡಿದರು. ನಿವೃತ್ತ

ನ್ಯಾಯಮೂರ್ತಿ ಪ್ರಕಾಶ್ ಪ್ರಭಾಕರ್ ನಾವಲೇಕರ್ ನೇತೃತ್ವದ ಸಮಿತಿಯು, ದೇಶದ ವಿವಿಧ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಗೆ ಭೇಟಿ ನೀಡಿ ಸ್ಥಳೀಯ ಆಡಳಿತಗಳೊಂದಿಗೆ ಪ್ರತ್ಯಕ್ಷ ಮಾಹಿತಿ ಸಂಗ್ರಹಿಸಲಿದೆ. ಭೇಟಿಯನ್ನು ಹೆಚ್ಚು ಅರ್ಥಪೂರ್ಣವಾಗಿಸಲು ಈಗಾಗಲೇ ವಿವರವಾದ ಪ್ರಶ್ನಾವಳಿಯನ್ನು ಸಿದ್ಧಪಡಿಸಲಾಗಿದ್ದು, ವಿವಿಧ ಕೇಂದ್ರ ಸಚಿವಾಲಯಗಳೊಂದಿಗೂ ಸಮಾಲೋಚನೆ ನಡೆಸಲಾಗುವುದು ಎಂದು ಸಮಿತಿ ವಿವರಿಸಿದೆ. ಸಮಿತಿಯ ಈ ಕಾರ್ಯತಂತ್ರವನ್ನು ಶ್ಲಾಘಿಸಿದ ಸಚಿವ ಅಮಿತ್ ಶಾ, ಸಮಿತಿಯ ದೈನಂದಿನ ಕಾರ್ಯಚಟುವಟಿಕೆಗಳಿಗೆ ಹಾಗೂ ರಾಜ್ಯಗಳ ಭೇಟಿಯ ಸಂದರ್ಭದಲ್ಲಿ ಅಗತ್ಯವಿರುವ ಎಲ್ಲಾ ರೀತಿಯ ನೆರವು ನೀಡುವಂತೆ ಕೇಂದ್ರ ಗೃಹ ಕಾರ್ಯದರ್ಶಿಯವರಿಗೆ ಸೂಚಿಸಿದರು. ಕಳೆದ ವರ್ಷ ಆಗಸ್ಟ್ ೧೫ ರಂದು ಪ್ರಧಾನಿ ನರೇಂದ್ರ ಮೋದಿ ಅವರು ಘೋಷಿಸಿದ್ದ ಮಹತ್ವಾಕಾಂಕ್ಷೆಯ 'ಹೈ-ಪಾವರ್ಡ್ ಡೆಮೊಗ್ರಾಫಿ ಮಿಷನ್' ಅಡಿಯಲ್ಲಿ ಈ ಉನ್ನತ ಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಅಕ್ರಮ ವಲಸೆಯಿಂದ ದೇಶದ ಜನಸಂಖ್ಯಾ ಚಿತ್ರಣದಲ್ಲಿ ಆಗುತ್ತಿರುವ ಬದಲಾವಣೆಗಳನ್ನು ಸಮಗ್ರವಾಗಿ ವಿಶ್ಲೇಷಿಸಿ, ಅದನ್ನು ತಡೆಗಟ್ಟಲು ಅಗತ್ಯವಿರುವ ಸೂಕ್ತ ನೀತಿಗಳು, ಶಾಸಕಾಂಗ ಹಾಗೂ ಆಡಳಿತಾತ್ಮಕ ಕ್ರಮಗಳನ್ನು ಶಿಫಾರಸು ಮಾಡುವುದು ಈ ಸಮಿತಿಯ ಮುಖ್ಯ ಜವಾಬ್ದಾರಿಯಾಗಿದೆ.

**********

ಸರಕು ಮತ್ತು ಸೇವಾ ತೆರಿಗೆ- ಜಿ.ಎಸ್.ಟಿ. ವ್ಯವಸ್ಥೆಯು ದೇಶದ ಒಕ್ಕೂಟ ವ್ಯವಸ್ಥೆಯನ್ನು ಬಲಪಡಿಸಿದೆ ಮತ್ತು ತೆರಿಗೆ ಆಡಳಿತದಲ್ಲಿ ಪಾರದರ್ಶಕತೆ ತಂದಿದೆ ಎಂದು ಕರ್ನಾಟಕ ಹೈಕೋರ್ಟ್ ಮುಖ್ಯ ನ್ಯಾಯಮೂರ್ತಿ ವಿಭು ಬಖ್ರು ಹೇಳಿದ್ದಾರೆ. ಬೆಂಗಳೂರಿನ ಕಾವೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಜಿ.ಎಸ್.ಟಿ. ದಿನಾಚರಣೆಯ ವಿಶೇಷ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ೨೦೧೭ರ ಜುಲೈ ೧ ರಂದು ಜಾರಿಗೆ ಬಂದ ಜಿಎಸ್‌ಟಿ ಕಾಯ್ದೆಯು ಒಂಬತ್ತು ವರ್ಷಗಳ ಯಶಸ್ವಿ ಆರ್ಥಿಕ ಮತ್ತು ಸಾಂಸ್ಥಿಕ ಪ್ರಯಾಣವನ್ನು ಪೂರ್ಣಗೊಳಿಸಿದೆ. ಹಳೆಯ ಸಂಕೀರ್ಣ ತೆರಿಗೆಗಳ ಬದಲಾಗಿ ಜಾರಿಗೆ ಬಂದ ಒಂದು ರಾಷ್ಟ್ರ, ಒಂದು ತೆರಿಗೆ' ಪರಿಕಲ್ಪನೆಯು ದೇಶಾದ್ಯಂತ ಏಕರೂಪದ ಮುಕ್ತ ಮಾರುಕಟ್ಟೆಯನ್ನು ಸೃಷ್ಟಿಸಿದೆ ಎಂದರು. ಈ ಸುಧಾರಣೆಯು ರಾಜ್ಯ ಗಡಿಗಳಲ್ಲಿ ತಪಾಸಣಾ ವಿಳಂಬವನ್ನು ನಿವಾರಿಸಿ, ಸಾರಿಗೆ ವ್ಯವಸ್ಥೆಯನ್ನು ಸುಗಮಗೊಳಿಸಿದೆ. ತಂತ್ರಜ್ಞಾನ-ಚಾಲಿತ ಜಿ.ಎಸ್.ಟಿ. ಜಾಲವು ಭೌತಿಕ ಸಂವಹನವನ್ನು ಕಡಿಮೆ ಮಾಡಿದ್ದು, ಭ್ರಷ್ಟಾಚಾರ ಮುಕ್ತ ಆಡಳಿತ ನಿರ್ಮಾಣವಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.

*********

ಪಿಎಂ ಇ-ಡ್ರೈವ್ ಯೋಜನೆಯಡಿ ಕೇಂದ್ರ ಸರ್ಕಾರ, ಬೆಂಗಳೂರಿಗೆ ೪ ಸಾವಿರದ ೫೦೦ ಎಲೆಕ್ಟ್ರಿಕ್ ಬಸ್‌ಗಳನ್ನು ಮಂಜೂರು ಮಾಡಿದೆ. ಆದರೆ ಈ ಯೋಜನೆಯನ್ನು ಕರ್ನಾಟದ ಸಾರಿಗೆ ಸಚಿವರು ಹೊರೆ ಎಂದಿದ್ದಾರೆ. ಮಂಜೂರಾದ ಬಸ್‌ಗಳನ್ನು ನಿಯೋಜಿಸಲು ರಾಜ್ಯ ಸರ್ಕಾರ ಹಿಂಜರಿಯುತ್ತಿದೆ ಎಂದು ಬೆಂಗಳೂರು ದಕ್ಷಿಣ ಸಂಸದ ತೇಜಸ್ವಿ ಸೂರ್ಯ ದೂರಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಅವರು, ಹೆಚ್ಚುತ್ತಿರುವ ಸಾರ್ವಜನಿಕ ಸಾರಿಗೆ ಬೇಡಿಕೆಯನ್ನು ಪೂರೈಸಲು ಬೆಂಗಳೂರಿಗೆ ತುರ್ತಾಗಿ ಹೆಚ್ಚಿನ ಬಸ್‌ಗಳು ಅಗತ್ಯವಿದೆ. ಖಾಸಗಿ ನಿರ್ವಾಹಕರು ಬಸ್‌ಗಳನ್ನು ಖರೀದಿಸುತ್ತಾರೆ. ಅವುಗಳ ನಿರ್ವಹಣೆಯನ್ನು ಕೈಗೊಳ್ಳುತ್ತಾರೆ ಮತ್ತು ಬ್ಯಾಟರಿಗಳನ್ನು ಬದಲಾಯಿಸುತ್ತಾರೆ. ಆದರೆ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಪ್ರತಿ ಕಿಲೋಮೀಟರ್ ಆಧಾರದ ಮೇಲೆ ಮಾತ್ರ ಪಾವತಿಸುತ್ತದೆ ಎಂದು ವಿವರಿಸಿದರು.

**********

ಏರ್ ಮಾರ್ಷಲ್ ತೇಜಿಂದರ್ ಸಿಂಗ್ ಅವರು ಇಂದು ಚೀಫ್ ಆಫ್ ಇಂಟಿಗ್ರೇಟೆಡ್ ಡಿಫೆನ್ಸ್ ಸ್ಟಾಫ್ ಟು ಚೇರ್‌ಮೆನ್ ಚೀಫ್ಸ್ ಆಫ್ ಸ್ಟಾಫ್ ಕಮಿಟಿ - ಸಿಐಎಸ್‌ಎಫ್ ಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡರು. ನಂತರ ಅವರು, ನವದೆಹಲಿಯ ರಾಷ್ಟ್ರೀಯ ಯುದ್ಧ ಸ್ಮಾರಕಕ್ಕೆ ತೆರಳಿ, ಹುತಾತ್ಮ ಯೋಧರಿಗೆ ಗೌರವ ನಮನ ಸಲ್ಲಿಸಿದರು.

**********

ಭಾರತೀಯ ವಾಯುಪಡೆಯ ಉಪಮುಖ್ಯಸ್ಥರಾಗಿ ಏರ್ ಮಾರ್ಷಲ್ ಅಶುತೋಷ್ ದೀಕ್ಷಿತ್ ಇಂದು ಅಧಿಕಾರ ವಹಿಸಿಕೊಂಡರು. ನಾಲ್ಕು ದಶಕಗಳ ಸೇವೆಯ ನಂತರ ನಿನ್ನೆ ನಿವೃತ್ತರಾದ ಏರ್ ಮಾರ್ಷಲ್ ನಾಗೇಶ್ ಕಪೂರ್ ಅವರ ಉತ್ತರಾಧಿಕಾರಿಯಾಗಿ ಅಧಿಕಾರ ವಹಿಸಿಕೊಂಡಿದ್ದಾರೆ.ಏರ್ ಮಾರ್ಷಲ್ ಅಶುತೋಷ್ ದೀಕ್ಷಿತ್ ಅವರು, ತಮ್ಮ ವೃತ್ತಿ ಜೀವನದಲ್ಲಿ ಆಪರೇಷನ್ ಸಫೇದ್ ಸಾಗರ್, ಆಪರೇಷನ್ ರಕ್ಷಕ್, ಕೋಪ್ ಇಂಡಿಯಾ, ಆಪರೇಷನ್ ಸಿಂದೂರ ಸೇರಿದಂತೆ ಹಲವು ಪ್ರಮುಖ ಕಾರ್ಯಾಚರಣೆಗಳಲ್ಲಿ ಭಾಗವಹಿಸಿದ್ದಾರೆ. ಅಲ್ಲದೆ ವಾಯುಪಡೆಯ ವಿವಿಧ ಪ್ರಮುಖ ಹುದ್ದೆಗಳನ್ನು ನಿರ್ವಹಿಸಿದ್ದಾರೆ. ಅವರಿಗೆ ವಾಯುಸೇನಾ ಪದಕ, ವಿಶಿಷ್ಟ ಸೇವಾ ಪದಕ, ಅತಿ ವಿಶಿಷ್ಟ ಸೇವಾ ಪದಕ ಮತ್ತು ಪರಮ ವಿಶಿಷ್ಟ ಸೇವಾ ಪದಕ ಪ್ರದಾನ ಮಾಡಲಾಗಿದೆ.

**********

ಲೆಫ್ಟಿನೆಂಟ್ ಜನರಲ್ ಸಂದೀಪ್ ಜೈನ್ ಅವರು ಇಂದು ಭಾರತೀಯ ಸೇನಾ ಸಿಬ್ಬಂದಿಯ ಉಪಮುಖ್ಯಸ್ಥರಾಗಿ ಅಧಿಕಾರ ವಹಿಸಿಕೊಂಡರು. ಇವರು ರಾಷ್ಟ್ರೀಯ ರಕ್ಷಣಾ ಅಕಾಡೆಮಿಯ ಹಳೆಯ ವಿದ್ಯಾರ್ಥಿಯಾಗಿದ್ದು, ೧೯೮೮ರ ಜೂನ್‌ನಲ್ಲಿ ಮಹಾರ್ ರೆಜಿಮೆಂಟ್‌ಗೆ ಸೇರ್ಪಡೆಯಾದರು. ಭಾರತೀಯ ಸೇನೆಯ ವಿವಿಧ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸಿದ ಅಪಾರ ಅನುಭವ ಹೊಂದಿರುವ ಲೆಫ್ಟಿನೆಂಟ್ ಜನರಲ್ ಸಂದೀಪ್ ಜೈನ್, ಈಶಾನ್ಯ ಭಾರತದಲ್ಲಿ ದಂಗೆ ನಿಗ್ರಹ ಕಾರ್ಯಾಚರಣೆಗಳಲ್ಲಿ ಭಾಗವಹಿಸಿದ್ದರು.

**********

ಪಾಕಿಸ್ತಾನದಲ್ಲಿರುವ ಐಸಿಸ್‌ಗೆ ಸೇರಿದ ಪ್ರದೇಶಗಳ ಮೇಲೆ ಅಫ್ಘಾನಿಸ್ತಾನ ಪಡೆಗಳು ವಾಯುದಾಳಿ ನಡೆಸಿವೆ. ಪಾಕಿಸ್ತಾನದ ಬಲೂಚಿಸ್ತಾನ ಮತ್ತು ಖೈಬರ್ ಪಖ್ತುನ್ವಾ ಪ್ರಾಂತ್ಯಗಳಲ್ಲಿನ ಐಸಿಸ್ ಕೇಂದ್ರಗಳ ಮೇಲೆ ನಿನ್ನೆ ರಾತ್ರಿ ದಾಳಿ ನಡೆಸಲಾಗಿದೆ. ಈ ದಾಳಿಯಲ್ಲಿ ಐಸಿಸ್ ಉಗ್ರರು ಹೆಚ್ಚಿನ ಸಂಖ್ಯೆಯಲ್ಲಿ ಮೃತಪಟ್ಟಿದ್ದು, ಯಾವುದೇ ಸಾಮಾನ್ಯ ನಾಗರಿಕರ ಸಾವು-ನೋವು ಸಂಭವಿಸಿಲ್ಲ ಎಂದು ಅಫ್ಘನ್ ಸಚಿವಾಲಯ ತಿಳಿಸಿದೆ.

**********

ಇಂಗ್ಲೆಂಡ್‌ನ ಚೆಸ್ಟರ್ ಲೆ ಸ್ಟ್ರೀಟ್‌ನ ರಿವರ್‌ಸೈಡ್ ಮೈದಾನದಲ್ಲಿಂದು ನಡೆಯಲಿರುವ ೫ ಪಂದ್ಯಗಳ ಸರಣಿಯ ಪುರುಷರ ಅಂತಾರಾಷ್ಟ್ರೀಯ ಟಿ-೨೦ ಕ್ರಿಕೆಟ್‌ನ ಮೊದಲ ಪಂದ್ಯದಲ್ಲಿ ಭಾರತ ಮತ್ತು ಇಂಗ್ಲೆಂಡ್ ತಂಡಗಳು ಸೆಣಸಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೧೦ ಗಂಟೆಗೆ ಆರಂಭವಾಗಲಿದೆ. ಟಿ-೨೦ ಕ್ರಿಕೆಟ್ ಸರಣಿಯ ನಂತರ, ಭಾರತ ತಂಡ, ಮೂರು ಪಂದ್ಯಗಳ ಏಕದಿನ ಕ್ರಿಕೆಟ್ ಸರಣಿಯಲ್ಲಿ ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ.

**********

ಅಮೆರಿಕದ ಅಟ್ಲಾಂಟಾ ಕ್ರೀಡಾಂಗಣದಲ್ಲಿಂದು ನಡೆಯುವ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ ೩೨ರ ಸುತ್ತಿನಲ್ಲಿ ಇಂಗ್ಲೆಂಡ್ ಮತ್ತು ಕಾಂಗೋ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ರಾತ್ರಿ ೯.೩೦ಕ್ಕೆ ಆರಂಭವಾಗಲಿದೆ. ಸಿಯಾಟಲ್‌ನಲ್ಲಿ ನಡೆಯುವ ೩೨ರ ಸುತ್ತಿನ ಮತ್ತೊಂದು ಪಂದ್ಯದಲ್ಲಿ ಬೆಲ್ಜಿಯಂ ಮತ್ತು ಸೆನೆಗಲ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಭಾರತೀಯ ಕಾಲಮಾನ ಮಧ್ಯರಾತ್ರಿ ೧.೩೦ಕ್ಕೆ ಆರಂಭವಾಗಲಿದೆ.

*****END*****